ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಅನುದಾನಿತ ಪದವಿಪೂರ್ವ ಕಾಲೇಜುಗಳ ಕಾರ್ಯಭಾರದ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

93 (203) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಅನುದಾನಿತ-ಅನುದಾನ ರಹಿತ ಪದವಿಪೂರ್ವ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ಒದಗಿಸುವುದು)

(ಆ) ಕಾರ್ಯಭಾರ ಅಂದರೇನು; ಪದವಿಪೂರ್ವ ಉಪನ್ಯಾಸಕರಿಗೆ ಸರ್ಕಾರವು ಒಂದು ವಾರಕ್ಕೆ ಎಷ್ಟು ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಲಾಗಿರುತ್ತದೆ ; ಈ ರೀತಿ ಕಾರ್ಯಭಾರ ನಿಗಧಿಪಡಿಸಲು ಇರುವ ಮಾನದಂಡಗಳೇನು ;

(ಇ) ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ವರೆಗೆ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ದಿನಾಂಕ:31.12.2020ರ ಅಂತ್ಯಕ್ಕೆ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರದ ಕೊರತೆಯಿದ್ದು, ಈ ಕಾರ್ಯಭಾರವನ್ನು ಪಕ್ಕದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿನ ಕಾರ್ಯಭಾರಕ್ಕೆ ಹೊಂದಾಣಿಕೆ ಮಾಡಿರುವ ಪ್ರಕರಣಗಳೆಷ್ಟು ? (ವಿವರವಾಗಿ ಜಿಲ್ಲಾವಾರು ಸಂಪೂರ್ಣ ಕಾಲೇಜಿನ ವಿಳಾಸ ಹಾಗೂ ಹುದ್ದೆಯ ಪದನಾಮದೊಂದಿಗೆ ವಿವರವಾದ ಮಾಹಿತಿಯನ್ನು ನೀಡುವುದು)